# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 20.03.2023ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಗಳು.

**ಉಪಸ್ಥಿತರು:**

| ಕ್ರ.ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಗಿರಿಧರ ರಾವ್ ಎಂ.ಎಸ್.,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಕರುಣಾಕರ್ ಎ. ಕೋಟೆಗಾರ್<br>(Online ಮೂಲಕ) | ಸದಸ್ಯರು | |
| 4. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 5. | ಪ್ರೊ. ಜಯರಾಜ್ ಅಮೀನ್<br>ಡೀನರು, ಕಲಾ ನಿಕಾಯ | ಸದಸ್ಯರು | |
| 6. | ಶ್ರೀ ಮೋಹನ್ ನಾಯ್ಕ್ | ಸದಸ್ಯರು | |
| 7. | ಡಾ. ರಾಜೇಂದ್ರ ಎಸ್. ನಾಯಕ್<br>(Online ಮೂಲಕ) | ಸದಸ್ಯರು | |
| 8. | ಶ್ರೀಮತಿ ಸಮೀರ ಕೆ.ಎ. | ಸದಸ್ಯರು | |
| 9. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 10. | ಪ್ರೊ. ರಾಜುಕೃಷ್ಣ ಚಲ್ಲಣ್ಣವರ್<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 11. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

### I. ನಡವಳಿಗಳ ದೃಢೀಕರಣ

1. ದಿನಾಂಕ 27.02.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

ದಿನಾಂಕ 27.02.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯನ್ನು ಈ ಕೆಳಗಿನ ತಿದ್ದುಪಡಿಯೊಂದಿಗೆ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.2:23(2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಿರಿಯ ಅಭಿಯಂತರರ ಹುದ್ದೆಗೆ ನೀಡಿರುವ ಮುಂಭಡ್ತಿಯನ್ನು ಪರಿಶೀಲಿಸಲು ರಚಿಸಲಾದ ಸಮಿತಿ ಸಭೆಯ ನಡವಳಿಯ ಬಗ್ಗೆ.

ತಿದ್ದುಪಡಿ ನಿರ್ಣಯ: ಸಮಿತಿ ಸಭೆಯ ನಡವಳಿಯನ್ನು ಸಿಂಡಿಕೇಟು ಸಭೆಯು ಅಂಗೀಕರಿಸಿತು. ಸದರಿ ನಡವಳಿಯ ಆಧಾರದ ಮೇಲೆ ಈ ಕೆಳಗಿನ ನಿರ್ಣಯವನ್ನು ಸಿಂಡಿಕೇಟು ಕೈಗೊಂಡಿತು.

ಸದರಿ ವಿಷಯಕ್ಕೆ ಸಂಬಂಧಿಸಿ, ಶ್ರೀ ಹೆಚ್. ಜಿ. ಕುಮಾರ್, ಶ್ರೀ ಉಮೇಶ್ ಬೋಜಗಾರ್, ಶ್ರೀ ಅರುಣ್ ಜೆ. ಕುಮಾರ್ ಇವರು ಮಾನ್ಯ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ದಾವೆ ಹೂಡಿರುವುದರಿಂದ ಪ್ರಸ್ತುತ ಯಥಾಸ್ಥಿತಿಯನ್ನು ಕಾಪಾಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ವಿಷಯವನ್ನು ಮಂಗಳೂರು ವಿಶ್ವವಿದ್ಯಾನಿಲಯದ ನ್ಯಾಯವಾದಿಗಳ ಮುಖಾಂತರ ಮಾನ್ಯ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯಕ್ಕೆ ನೀಡಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

### II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿ.ಸ.2:1 (2023)

ವಿಷಯ: ಮಂಗಳೂರಿನ "ಸ್ವಸ್ತಿಕಾ ನ್ಯಾಷನಲ್ ಸ್ಕೂಲ್" ಎಂಬ ವಿದ್ಯಾಸಂಸ್ಥೆಯ ಹೆಸರನ್ನು "ಸ್ವಸ್ತಿಕಾ ನ್ಯಾಷನಲ್ ಬಿಸಿನೆಸ್ ಸ್ಕೂಲ್" (Swastika National Business School) ಎಂಬುದಾಗಿ ಬದಲಾಯಿಸುವ ಕುರಿತು.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿ.ಸ.2:2 (2023)

ವಿಷಯ: ಕನ್ನಡ ಹಬ್ಬ ಕಾರ್ಯಕ್ರಮಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ಸಹಯೋಗ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಮಂಗಳೂರು ವಿಶ್ವವಿದ್ಯಾನಿಲಯದ ಸಹಭಾಗಿತ್ವದಲ್ಲಿ ಸದರಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಒಟ್ಟು ಮೊತ್ತ ರೂ.1,00,000.00 (ರೂಪಾಯಿ ಒಂದು ಲಕ್ಷಗಳು ಮಾತ್ರ) ಕ್ಕೆ ಸೀಮಿತಗೊಳಿಸಿ, ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಇನ್ನು ಮುಂದಕ್ಕೆ ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ನಡೆಸುವ ಕಾರ್ಯಕ್ರಮಗಳಿಗೆ ಸಂಬಂಧಿಸಿ ವಿಶ್ವವಿದ್ಯಾನಿಲಯದಿಂದ ದೇಣಿಗೆಗಳನ್ನು ನೀಡಲು ಆಯವ್ಯಯದಲ್ಲಿ ಸೂಕ್ತ ಲೆಕ್ಕ ಶೀರ್ಷಿಕೆಗಳನ್ನು ಸೃಜಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮುಂದುವರಿದು, ಸದರಿ ದೇಣಿಗೆಗಳ ಮೊತ್ತವು ಆರ್ಥಿಕ ವರ್ಷದಲ್ಲಿ ರೂ.10,00,000.00 (ರೂಪಾಯಿ ಹತ್ತು ಲಕ್ಷಗಳು ಮಾತ್ರ)ಕ್ಕೆ ಸೀಮಿತಗೊಳಿಸಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿ.ಸ.2:3 (2023)

ವಿಷಯ: ಸಾಮಾಜಿಕ ಜಾಲತಾಣಗಳಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಕುರಿತು ಪ್ರಚಾರ ಮಾಡಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಅಂತಿಮವಾಗಿ, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗದ ವಿದ್ಯಾರ್ಥಿಗಳಿಂದ "ಮೀಡಿಯಾ ಕ್ಲಬ್"ನ್ನು ಪ್ರಾರಂಭಿಸಿಕೊಂಡು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸ್ನಾತಕ ಹಾಗೂ ಸ್ನಾತಕೋತ್ತರ ಕಾರ್ಯಕ್ರಮಗಳ ಕುರಿತು ಪ್ರಚಾರ ಕಾರ್ಯವನ್ನು ಹಮ್ಮಿಕೊಳ್ಳಲು ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಿ ಪ್ರಸ್ತಾವನೆಯನ್ನು ಕೈಬಿಡಲಾಯಿತು. ಇದಕ್ಕೆ ಸಂಬಂಧಿಸಿ ತಗಲುವ ಆರ್ಥಿಕ ಹೊರೆಯನ್ನು ನಿಯಮಾನುಸಾರವಾಗಿ ವಿಶ್ವವಿದ್ಯಾನಿಲಯವೇ ಭರಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿ.ಸ.2:4 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2021-22ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು. ವಾರ್ಷಿಕ ವರದಿಯನ್ನು ಸಭೆಯ ದಿನದಂದೇ ಸದಸ್ಯರುಗಳಿಗೆ ನೀಡಿರುವುದನ್ನು ಸದಸ್ಯರು ಗಮನಿಸಿರುವುದರಿಂದ ಇನ್ನು ಮುಂದಕ್ಕೆ ಇಂತಹ ತಪ್ಪುಗಳು ಮರುಕಳಿಸದಂತೆ ಸದಸ್ಯರುಗಳಿಗೆ ಪ್ರತಿಗಳನ್ನು ಸಾಕಷ್ಟು ದಿನ ಮುಂಚಿತವಾಗಿ ಒದಗಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ವಿ.ಸ.2:5 (2023)

ವಿಷಯ: ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತಾತ್ಕಾಲಿಕ ಸಿಬ್ಬಂದಿಗಳಿಗೆ ಪ್ರಯಾಣಭತ್ಯೆ / ದಿನಭತ್ಯೆಯನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಸುಧೀರ್ಘವಾಗಿ ಚರ್ಚಿಸಲಾಯಿತು. ಅಂತಿಮವಾಗಿ, ಇತರೇ ಸರಕಾರಿ ಇಲಾಖೆಗಳು ಮತ್ತು ಇತರೇ ವಿಶ್ವವಿದ್ಯಾನಿಲಯಗಳಿಂದ ಈ ಬಗ್ಗೆ ಮಾಹಿತಿಯನ್ನು ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಅದರೊಂದಿಗೆ, ಈ ಬಗ್ಗೆ ಸರಕಾರಕ್ಕೂ ಪತ್ರ ಬರೆದು, ನಿರ್ದೇಶನ ಕೋರಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

ಈ ಎಲ್ಲಾ ಮಾಹಿತಿಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿಯನ್ನು ಮರು ಮಂಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ವಿ.ಸ.2:6 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2019-20ನೇ ಸಾಲಿನ ಲೆಕ್ಕಪರಿಶೋಧನ ವರದಿ - ಅನುಪಾಲನಾ ವರದಿಯ ಅನುಮೋದನೆ ಕುರಿತು.

ನಿರ್ಣಯ: ಅನುಪಾಲನಾ ವರದಿಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಕ್ರಮ ಸಂಖ್ಯೆ 61 ಕಂಡಿಕೆ ಸಂಖ್ಯೆ 21.5 - ಶ್ರೀಮತಿ ನಾಗವೇಣಿ, ಹಿರಿಯ ಸಹಾಯಕರು, ಇವರಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಉಲ್ಲಂಘಿಸಿ ನೇರವಾಗಿ ಸಹಾಯಕ ಕುಲಸಚಿವರ ಹುದ್ದೆಗೆ ಪದೋನ್ನತಿ ನೀಡಿರುವುದು. - ಈ ವಿಷಯಕ್ಕೆ ಸಂಬಂಧಿಸಿದ ಅನುಪಾಲನಾ ವರದಿಯಲ್ಲಿ ಈ ಕೆಳಗಿನ ತಿದ್ದುಪಡಿಗಳನ್ನು ಮಾಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಸಿತು.

ಪುಟ ಸಂಖ್ಯೆ 58ರಲ್ಲಿ ಈ ಕೆಳಗಿನಂತೆ ತಿದ್ದುಪಡಿ ಮಾಡಲಾಯಿತು.

ಸರ್ಕಾರಿ ಆದೇಶ ಸಂಖ್ಯೆ:……………….. ಹಿರಿಯ ಸಹಾಯಕ ವೃಂದದಲ್ಲಿ ಮುಂಭಡ್ತಿ ನೀಡಲಾದ ಶ್ರೀ ಸ್ವಾಮಿನಾಥನ್ ಇವರ ಜಾತಿ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿ ನೇತೃತ್ವದ ಜಾತಿ ಪರಿಶೀಲನಾ ಸಮಿತಿ ರದ್ದುಪಡಿಸಿದ್ದರಿಂದ ಶ್ರೀ ಸ್ವಾಮಿನಾಥನ್ ಇವರು ಮಾನ್ಯ ಉಚ್ಛನ್ಯಾಯಾಲಯದಲ್ಲಿ ದಾವೆ ಹೂಡಿರುತ್ತಾರೆ. ಈ ಪ್ರಕರಣದ ವಿಚಾರಣೆಯು ಮಾನ್ಯ ಉಚ್ಛನ್ಯಾಯಾಲಯದಲ್ಲಿ ……………. ವಿವರಣೆಯನ್ನು ಈ ಕೆಳಗೆ ನೀಡಲಾಗಿದೆ.

ಪುಟ ಸಂಖ್ಯೆ 60 ರ ಕ್ರಮ ಸಂಖ್ಯೆ 7 ನ್ನು ಈ ಕೆಳಗಿನಂತೆ ತಿದ್ದುಪಡಿ ಮಾಡಲಾಯಿತು.

7. ಈ ಹಿನ್ನೆಲೆಯಲ್ಲಿ ಶ್ರೀ ಸ್ವಾಮಿನಾಥನ್ ಅವರನ್ನು ಹಿರಿಯ ಸಹಾಯಕ ಹುದ್ದೆಯ ಪರಿಶಿಷ್ಟ ಜಾತಿ-ಬ್ಯಾಕ್‌ಲಾಗ್ ರೋಸ್ಟರ್ ಬಿಂದುವಿನಿಂದ ತೆರವುಗೊಳಿಸಿ ಅವರನ್ನು ಅದೇ ಹುದ್ದೆಯ ಸಾಮಾನ್ಯ ಜೇಷ್ಠತೆಯಲ್ಲಿ ಮುಂದುವರಿಸಿ, ಅವರಿಂದ ತೆರವಾದ ಪರಿಶಿಷ್ಟ ಜಾತಿ ಬ್ಯಾಕ್ ಲಾಗ್ ರೋಸ್ಟರ್ ಬಿಂದುವಿನಲ್ಲಿ ಶ್ರೀ ಸ್ವಾಮಿನಾಥನ್ ನಂತರದ ಸೇವಾ ಜೇಷ್ಠತೆ ಹೊಂದಿದ್ದ ದಿನಾಂಕ 30.11.2007 ರ ಆದೇಶದಲ್ಲಿ ಮುಂಭಡ್ತಿಯನ್ನು ನೀಡಿರುವ ಶ್ರೀಮತಿ ಲಲಿತಾ ಕೆ. ಆರ್. ಅವರನ್ನು ನಿಯುಕ್ತಿಗೊಳಿಸಲಾಗಿದೆ.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿ.ಸ.2:7 (2023)

ವಿಷಯ: ಡಾ. ಪೌಲ್ ಜಿ. ಅಕ್ವಿನಸ್, ಪ್ರಾಧ್ಯಾಪಕರು, ಸಮಾಜಕಾರ್ಯ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ University Hospitals – Coventry and Warwickshire, University of Warwick (United of Kingdom) ಇಲ್ಲಿ Leadership and Management ಕುರಿತು ಉಪನ್ಯಾಸ ನೀಡಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ವಿದ್ಯಾರ್ಥಿಗಳ ಶೈಕ್ಷಣಿಕ ತರಗತಿಗಳಿಗೆ ತೊಂದರೆಯಾಗದ ರೀತಿಯಲ್ಲಿ ಉಪನ್ಯಾಸ ನೀಡಲು ಮತ್ತು ಉಪನ್ಯಾಸದ ಬಳಿಕ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಸದರಿಯವರಿಗೆ ತಿಳಿಸಬೇಕೆಂಬುದಾಗಿ ನಿರ್ಣಯಿಸಿ, ಪ್ರಸ್ತಾವನೆಗೆ ಷರತ್ತುಬದ್ಧ ಅನುಮತಿಯನ್ನು ಸಿಂಡಿಕೇಟು ನೀಡಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿ.ಸ.2:8 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅರಭಾಷೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸುವ ಕುರಿತು ರಚಿಸಲಾದ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿ.ಸ.2:9 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಸ್ವಾಮಿ ವಿವೇಕಾನಂದರ ಪುತ್ಥಳಿ ಸ್ಥಾಪನೆ ಕುರಿತು.

ನಿರ್ಣಯ: ಪ್ರಸ್ತಾವನೆಗೆ ಸಂಬಂಧಿಸಿ, ಈಗಾಗಲೇ ಹಲವಾರು ಬಾರಿ ಟೆಂಡರು ಕರೆದಿದ್ದು, ಪ್ರಸ್ತುತ ಸ್ವೀಕೃತವಾಗಿರುವ ಆರ್ಥಿಕ ಬಿಡ್ಡನ್ನು ತೆರೆದು ಸದರಿ ಸಂಸ್ಥೆಯೊಂದಿಗೆ ದರಸಂಧಾನ ಮಾಡಿಕೊಂಡು ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿ.ಸ.2:10 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Yenepoya Deemed to be University, Deralakatte ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿ.ಸ.2:11 (2023)

ವಿಷಯ: ಸಮಾಜಕಾರ್ಯ ವಿಭಾಗದ ಬೋಧಕ ಸಿಬ್ಬಂದಿಗಳ ದೂರಿನ ಬಗ್ಗೆ.

ನಿರ್ಣಯ: ಪ್ರಕರಣಕ್ಕೆ ಸಂಬಂಧಿಸಿ, ICC ನೀಡಿದ ವರದಿಯನ್ನು ಸಿಂಡಿಕೇಟು ಸಭೆಯು ಅಂಗೀಕರಿಸಿತು. ಈ ಬಗ್ಗೆ ನಿಯಮಾನುಸಾರ ಇಲಾಖಾ ವಿಚಾರಣೆ ನಡೆಸಿ, ಮುಂದಿನ ಕ್ರಮ ಕೈಗೊಳ್ಳಲು ಕುಲಸಚಿವರಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿ.ಸ.2:12 (2023)

ವಿಷಯ: NEP 2020 - Issues and Challenges - ಕಾರ್ಯಗಾರ ನಡೆಸುವ ಸಂಬಂಧ ಸಹಯೋಗ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಾ ಮಂಡಲಿಯ ಪ್ರಭಾರ ನಿರ್ದೇಶಕರಾಗಿರುವ ಪ್ರೊ. ಮಂಜಯ್ಯ ಡಿ. ಹೆಚ್., ಸ್ನಾತಕೋತ್ತರ ಗಣಕವಿಜ್ಞಾನ ಇವರ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿಯನ್ನು ರಚಿಸಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಸದರಿ ಕಾರ್ಯಕ್ರಮಕ್ಕೆ ಒಟ್ಟು ಮೊತ್ತ ರೂ.2,00,000.00 (ರೂಪಾಯಿ ಎರಡು ಲಕ್ಷಗಳು ಮಾತ್ರ) ನ್ನು ವಿಶ್ವವಿದ್ಯಾನಿಲಯದಿಂದ ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿ.ಸ.2:13 (2023)

ವಿಷಯ: ಯುಜಿಸಿ ನಿಯಮಾವಳಿ 2016/2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ/ ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಸ್ಕ್ರೀನಿಂಗ್-ಕಂ-ಇವ್ಯಾಲ್ಯುವೇಶನ್/ ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ವೃತ್ತಿ ಪದೋನ್ನತಿಗೆ ಬಾಕಿ ಇರುವ ಅಧ್ಯಾಪಕರಿಗೆ, ಅರ್ಜಿ ಸಲ್ಲಿಸಲು ತಿಳಿಸುವಂತೆ, ಎಲ್ಲಾ ಸ್ನಾತಕೋತ್ತರ ವಿಭಾಗಗಳಿಗೆ ಸುತ್ತೋಲೆ ಕಳುಹಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಈಗಾಗಲೇ ಅರ್ಜಿ ಸಲ್ಲಿಸಿರುವ ಬೋಧಕರ ವೃತ್ತಿ ಪದೋನ್ನತಿಗೆ ಸಂಬಂಧಿಸಿದ ಪ್ರಕ್ರಿಯೆಯನ್ನು ಅಂತಿಮಗೊಳಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿ.ಸ.2:14 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಡುಗೆಗಾರ / ಸಹಾಯಕ ಅಡುಗೆಗಾರ (Cook / Assistant Cook) ಮತ್ತು ಅಡುಗೆ / ನಿಲಯ ಸಹಾಯಕ (Kitchen / Hostel Assistant) ಹುದ್ದೆಗಳನ್ನು ಗ್ರೂಪ್ 'ಡಿ' ವೃಂದದಡಿ ನಮೂದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು. ಸಮಾನ ವೇತನ ಶ್ರೇಣಿ ಹೊಂದಿರುವ ಹುದ್ದೆಗಳನ್ನು ಒಂದೇ ಗುಂಪಿನಡಿ ಪರಿಗಣಿಸಬಹುದೆಂಬುದಾಗಿಯೂ ಸಿಂಡಿಕೇಟು ಅಭಿಪ್ರಾಯಪಟ್ಟಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿ.ಸ.2:15 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಭಡ್ತಿಗಾಗಿ ಮೀಸಲಿರಿಸಿದ ವಿವಿಧ ವೃಂದದ ಬೋಧಕೇತರ ಖಾಲಿ ಹುದ್ದೆಗಳಿಗೆ ಭಡ್ತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿ.ಸ.2:16 (2023)

ವಿಷಯ: ಕುಲಪತಿಗಳ ನೇಮಕಾತಿಗೆ ಸಂಬಂಧಿಸಿದ ಶೋಧನಾ ಸಮಿತಿಗೆ ಸಿಂಡಿಕೇಟಿನಿಂದ ಒಬ್ಬರನ್ನು ನಾಮನಿರ್ದೇಶನ ಮಾಡುವ ಬಗ್ಗೆ.

ನಿರ್ಣಯ: ಕುಲಪತಿಗಳ ನೇಮಕಾತಿಗೆ ಸಂಬಂಧಿಸಿ, ಶೋಧನಾ ಸಮಿತಿಗೆ ಆರು ಜನ ತಜ್ಞರ ಪೈಕಿ ಓರ್ವರನ್ನು ಸಿಂಡಿಕೇಟಿನಿಂದ ನಾಮನಿರ್ದೇಶನ ಮಾಡಲಾಯಿತು.

**ಇತರ ವಿಷಯಗಳು**

1. ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ಸಿಬ್ಬಂದಿಗಳ ಮುಂಭಡ್ತಿ ಪ್ರಕ್ರಿಯೆಗೆ ಸಂಬಂಧಿಸಿದ ಗೊಂದಲಗಳನ್ನು ನಿವಾರಿಸಲು ರೋಸ್ಟರ್ ವಹಿಯನ್ನು ಸಮಾಜ ಕಲ್ಯಾಣ ಇಲಾಖೆ ಮತ್ತು ವಿಷಯ ತಜ್ಞರನ್ನು ವಿಶ್ವವಿದ್ಯಾನಿಲಯಕ್ಕೆ ಆಹ್ವಾನಿಸಿಕೊಂಡು ರೋಸ್ಟರ್ ಬಿಂದುಗಳನ್ನು ಪರಿಶೀಲಿಸಲು ಶೀಘ್ರದಲ್ಲಿ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

2. ಮಂಗಳೂರು ವಿಶ್ವವಿದ್ಯಾನಿಲಯದ ಅಡಿಟ್ ಆಕ್ಷೇಪಣೆಗಳಿಗೆ ಸಂಬಂಧಿಸಿ, ಅಡಿಟ್ ಆಕ್ಷೇಪಣೆ ಸ್ವೀಕೃತವಾದ ತಕ್ಷಣ ಸದರಿ ಆಕ್ಷೇಪಣೆಯ ಬಗ್ಗೆ ಸಂಬಂಧಪಟ್ಟ ಸಿಬ್ಬಂದಿಗಳಿಗೆ ತಿಳಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಸಿತು. ನಂತರ ಸಂಬಂಧಪಟ್ಟ ವಿಭಾಗದಿಂದ ಸದರಿ ಮಾಹಿತಿಯನ್ನು ಕ್ರೋಢೀಕರಿಸಿಕೊಂಡು ಅಡಿಟ್ ವಿಷಯದಲ್ಲಿ ಪರಿಣತಿ ಹೊಂದಿರುವ ತಜ್ಞರಿಗೆ ಸದರಿ ಮಾಹಿತಿಯ ವರದಿಯನ್ನು ಪರಿಶೀಲನೆಗೆ ನೀಡಿದಲ್ಲಿ ಮುಂಬರುವ ದಿನಗಳಲ್ಲಿ ಅಡಿಟ್ ಪಾರಾಗಳನ್ನು ಕಡಿಮೆ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

3. ಮಾನ್ಯ ಕುಲಪತಿಗಳು ತಾನು ಕುಲಪತಿಯಾಗಿ ಅಧಿಕಾರ ವಹಿಸಿಕೊಂಡ ದಿನದಿಂದ ಈವರೆಗೆ ಇರುವ ಅಡಿಟ್ ಆಕ್ಷೇಪಣೆಗಳು ಸದರಿ ಆಕ್ಷೇಪಣೆಗಳಲ್ಲಿ ಎಷ್ಟು ಮೊತ್ತವನ್ನು ವಸೂಲಾತಿ ಮಾಡಲಾಗಿದೆ ಮತ್ತು ಎಷ್ಟು ಮೊತ್ತ ವಸೂಲಾತಿಗೆ ಬಾಕಿಯಿದೆ ಎಂಬ ವಿವರವನ್ನು ಹಣಕಾಸು ವಿಭಾಗದಿಂದ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಮಾನ್ಯ ಕುಲಪತಿಗಳು ತಿಳಿಸಿದಾಗ ಸಭೆಯು ತನ್ನ ಒಪ್ಪಿಗೆಯನ್ನು ನೀಡಿತು.

4. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕೈಗೊಂಡಿರುವ Double entry systemನ ಪ್ರಗತಿಯ ವರದಿಯನ್ನು ಒಂದು ವಾರದೊಳಗಾಗಿ ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ರವಾನಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಿ ಈ ಬಗ್ಗೆ ಹಣಕಾಸು ಅಧಿಕಾರಿಯವರಿಗೆ ಕ್ರಮಕೈಗೊಳ್ಳಲು ಸೂಚನೆ ನೀಡಲಾಯಿತು. ಸದರಿ ಪ್ರಕ್ರಿಯೆಗೆ ಸಂಬಂಧಿಸಿ, ಪಾವತಿಗೆ ಬಾಕಿಯಿರುವ ಮೊತ್ತವನ್ನು ಕೂಡಲೇ ಪಾವತಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ತಿಳಿಸುತ್ತಾ, ಈ ಬಗ್ಗೆ ಹಣಕಾಸು ಅಧಿಕಾರಿಯವರಿಗೆ ಸೂಚನೆ ನೀಡಲಾಯಿತು.

5. ಸಿಂಡಿಕೇಟು ಸದಸ್ಯರುಗಳಾದ ಪ್ರೊ. ಕರುಣಾಕರ್ ಎ. ಕೋಟೆಗಾರ್ ಮತ್ತು ಶ್ರೀ ರವಿಚಂದ್ರ ಪಿ.ಎಂ. ಇವರುಗಳು ಸಲ್ಲಿಸಿರುವ ಪ್ರಸ್ತಾವನೆ "Start a Study Circle on Indian Knowledge system at Mangalore University and all the affiliated Colleges" ಗೆ ಸಂಬಂಧಿಸಿದ ಪ್ರಕ್ರಿಯೆಯ ಪ್ರಗತಿಯ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಗಿ, ಈ ಬಗೆಗಿನ ಕಾರ್ಯವು ಪ್ರಗತಿಯಲ್ಲಿದ್ದು, ಕಾಲೇಜುಗಳಿಗೆ ಸುತ್ತೋಲೆ ಕಳುಹಿಸಲಿರುವ ವಿಷಯವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

6. ಮಂಗಳೂರು ವಿಶ್ವವಿದ್ಯಾನಿಲಯದಿಂದ 15 ಶಾಲೆಗಳನ್ನು ದತ್ತು ಸ್ವೀಕರಿಸಲಾಗಿದೆ. ಸದರಿ ಎಲ್ಲಾ ಶಾಲೆಗಳಿಂದ ತಮ್ಮಲ್ಲಿರುವ ಮೂಲಭೂತ ಸೌಕರ್ಯಗಳ ಲಭ್ಯತೆಯ ಬಗ್ಗೆ ವರದಿಯನ್ನು ಪಡೆದುಕೊಳ್ಳಲಾಗಿರುವ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು. ಸದರಿ ಶಾಲೆಗಳಿಗೆ ಅಪೇಕ್ಷಿತ ಮೂಲಭೂತ ಸೌಕರ್ಯಗಳನ್ನು ಆದ್ಯತೆಯ ನೆಲೆಯಲ್ಲಿ ನಿಯಮಾನುಸಾರವಾಗಿ ಒದಗಿಸಲು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮುಂದುವರಿದು, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ವಿಭಾಗಗಳಿಂದ ಆಸಕ್ತ ಶಿಕ್ಷಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಸದರಿ ಶಾಲೆಗಳಿಗೆ ಹೋಗಿ ತಮ್ಮಲ್ಲಿರುವ ವಿಶೇಷ ಅನುಭವಗಳನ್ನು ಸದರಿ ಶಾಲೆಗಳ ವಿದ್ಯಾರ್ಥಿಗಳಿಗೆ ಧಾರೆ ಎರೆಯಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ಬಗ್ಗೆ ಎಲ್ಲಾ ಸ್ನಾತಕೋತ್ತರ ವಿಭಾಗಗಳಿಗೆ ಸುತ್ತೋಲೆ ಹೊರಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

7. ಅತಿಥಿ ಉಪನ್ಯಾಸಕರಿಗೆ ಪಾವತಿಗೆ ಬಾಕಿಯಿರುವ ಮೊತ್ತವನ್ನು ಮೇ 31 2023ರೊಳಗಾಗಿ ಪಾವತಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

8. ಮಂಗಳೂರು ವಿಶ್ವವಿದ್ಯಾನಿಲಯದಿಂದ ಪಾವತಿಗೆ ಬಾಕಿಯಿರುವ ಒಟ್ಟು ಮೊತ್ತದ ಪಟ್ಟಿಯನ್ನು ಕೂಡಲೇ ತಯಾರಿಸಿಕೊಂಡು, ಪಾವತಿಗೆ ಕೂಡಲೇ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ಹಣಕಾಸು ಅಧಿಕಾರಿಯವರಿಗೆ ಸೂಚಿಸಿತು.

9. ಮಂಗಳೂರು ವಿಶ್ವವಿದ್ಯಾನಿಲಯದ ಸಾಂಸ್ಕೃತಿಕ ನೀತಿಯನ್ನು ಬಿಡುಗಡೆಗೊಳಿಸಲಾಗಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿ, ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "Centre for cultural development" ಘಟಕವನ್ನು ಪ್ರಾರಂಭಿಸಲಾಗುವುದು ಎಂಬ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಘಟಕಕ್ಕೆ ಪರಿಣಿತರೋರ್ವರನ್ನು ತಾತ್ಕಾಲಿಕ ನೆಲೆಯಲ್ಲಿ ನಿಯಮಾನುಸಾರ ನೇಮಕಾತಿ ಮಾಡಿಕೊಂಡು ಸದರಿ ನೇಮಕಾತಿಗೆ ಸರಕಾರದ ಅನುಮತಿಯನ್ನು ಕೋರಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು. ಅರ್ಹ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲು ಈ ಕೆಳಗಿನ ಸಮಿತಿಯನ್ನು ರಚಿಸಲಾಯಿತು.

1. ಪ್ರೊ. ಜಯರಾಜ್ ಅಮೀನ್, - ಅಧ್ಯಕ್ಷರು
ಮಾನ್ಯ ಸಿಂಡಿಕೇಟು ಸದಸ್ಯರು ಹಾಗೂ
ಡೀನರು, ಕಲಾ ನಿಕಾಯ, ಮಂಗಳೂರು ವಿಶ್ವವಿದ್ಯಾನಿಲಯ
2. ಶ್ರೀ ರವಿಚಂದ್ರ ಪಿ. ಎಂ., - ಸದಸ್ಯರು
ಮಾನ್ಯ ಸಿಂಡಿಕೇಟು ಸದಸ್ಯರು
3. ಕುಲಸಚಿವರು - ಸಂಚಾಲಕರು

10. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 75ನೇ ಸ್ವಾತಂತ್ರ್ಯ ದಿನಾಚರಣೆಯದ ಪ್ರಯುಕ್ತ ರಚಿಸಲಾದ "ಅಮೃತ್ ಗಾರ್ಡನ್" ನ ನಿರ್ವಹಣೆಗಾಗಿ ಪರಿಣಿತರೋರ್ವರನ್ನು ತಾತ್ಕಾಲಿಕ ನೆಲೆಯಲ್ಲಿ ನಿಯಮಾನುಸಾರ ನೇಮಕಾತಿ ಮಾಡಿಕೊಂಡು ಸದರಿ ನೇಮಕಾತಿಗೆ ಸರಕಾರದ ಅನುಮತಿಯನ್ನು ಕೋರಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

11. ದಿನಾಂಕ 14.04.2023ರಂದು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಂಬೇಡ್ಕರ್ ಜಯಂತಿಯನ್ನು ವಿಶ್ವವಿದ್ಯಾನಿಲಯದ ವತಿಯಿಂದ ಹಮ್ಮಿಕೊಂಡಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಸದರಿ ದಿನಾಂಕದೊಳಗಾಗಿ ವಿಶ್ವವಿದ್ಯಾನಿಲಯದಲ್ಲಿ ಈಗಾಗಲೇ ಅಂಬೇಡ್ಕರ್ ಪ್ರತಿಮೆಯನ್ನು ಸ್ಥಾಪಿಸಿರುವ ಪ್ರದೇಶದಲ್ಲಿ ಬಾಕಿ ಉಳಿದಿರುವ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಸದರಿ ದಿನದ ಮಹತ್ವದ ಬಗ್ಗೆ ಬೇರೆ ಬೇರೆ ಕಾರ್ಯಕ್ರಮಗಳನ್ನು ವಿಶ್ವವಿದ್ಯಾನಿಲಯದಲ್ಲಿ ಹಮ್ಮಿಕೊಳ್ಳಲಿರುವುದಾಗಿಯೂ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು. ಸದರಿ ದಿನದಂದು ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧಕ್ಕೆ ಹೊಸದಾಗಿ ಅಳವಡಿಸಿರುವ ಲಿಫ್ಟನ್ನು ಉದ್ಘಾಟಿಸಲಿರುವ ವಿಚಾರವನ್ನು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಮಂಗಳೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಘಟಕದ ವಿಶೇಷಾಧಿಕಾರಿಯವರನ್ನು ಸದಸ್ಯ ಸಂಚಾಲಕರನ್ನಾಗಿ ನೇಮಿಸಿಕೊಂಡು ಸಮಿತಿಯನ್ನು ರಚಿಸುವ ಅಧಿಕಾರವನ್ನು ಕುಲಸಚಿವರಿಗೆ ನೀಡಲಾಯಿತು.

12. ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಾ ಅಡಿಟೋರಿಯಂಗೆ ಜನರೇಟರ್ ಅಳವಡಿಸುವ ಕಾಮಗಾರಿಗೆ ಸಂಬಂಧಿಸಿ, ಈಗಾಗಲೇ ಸಿಂಡಿಕೇಟು ಕೈಗೊಂಡಿರುವ ನಿರ್ಣಯವನ್ನು ಹಿಂಪಡೆದುಕೊಂಡು ಜನರೇಟರನ್ನು ಖರೀದಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

13. ಇಂಜಿನಿಯರಿಂಗ್ ವಿಭಾಗದಲ್ಲಿ ಮುಂಭಡ್ತಿಗೆ ಅವಕಾಶವಿಲ್ಲದಿರುವ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಹೆಚ್ಚುವರಿ ಕಾರ್ಯಭಾರಗಳನ್ನು ನಿರ್ವಹಿಸುತ್ತಿದ್ದಲ್ಲಿ

ಸದರಿಯವರುಗಳಿಗೆ ನಿಯಮಾನುಸಾರ ಸೂಕ್ತ ಪ್ರಭಾರ ಭತ್ಯೆಯನ್ನು ನಿಗದಿಪಡಿಸಿಕೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

14. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ರಚನೆಗೆ / ತಿದ್ದುಪಡಿಗೆ ಬಾಕಿ ಇರುವ ಎಲ್ಲಾ ಪರಿನಿಯಮಗಳನ್ನು ಎಪ್ರಿಲ್ ತಿಂಗಳ ಅಂತ್ಯದೊಳಗೆ ಪರಿಶೀಲಿಸಿಕೊಂಡು ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಸಿತು.

15. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಂಚಿಕೆ ಮಾಡಲು 535 ಸಂಖ್ಯೆಯ ಲ್ಯಾಪ್‌ಟಾಪ್‌ಗಳು ಬಾಕಿಯಿರುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಲ್ಯಾಪ್‌ಟಾಪ್ ಗಳಿಗೆ ತಗಲುವ ವೆಚ್ಚವನ್ನು ಸಿಂಡಿಕೇಟು ಸಭೆಯ ಘಟನೋತ್ತರ ಅನುಮೋದನೆಯ ನಿರೀಕ್ಷೆ ಮೇರೆಗೆ ನಿಯಮಾನುಸಾರ ಭರಿಸಲು ಸಿಂಡಿಕೇಟು ಸಭೆಯು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಿತು.

16. ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯಲ್ಲಿ ಪರೀಕ್ಷಾ ಸಂಬಂಧಿತ ಕೆಲಸ ಕಾರ್ಯಗಳನ್ನು ನಮೂದಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

17. ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ವಿಭಾಗಕ್ಕೆ ಸಂಬಂಧಿಸಿ ಸಾಮಾಜಿಕ ಜಾಲತಾಣ, ಮಾಧ್ಯಮ ಮತ್ತು ಪತ್ರಿಕೆಗಳಲ್ಲಿ ವಿದ್ಯಾರ್ಥಿಗಳಿಂದ, ಸಾರ್ವಜನಿಕರಿಂದ ನಿರಂತರವಾಗಿ ಸ್ವೀಕೃತವಾಗುವ ದೂರು, ಸಲಹೆ, ಇತರೇ ಮಾಹಿತಿಗಳಿಗೆ ಸಂಬಂಧಿಸಿ, ವಿಶ್ವವಿದ್ಯಾನಿಲಯದಿಂದ ನೀಡಬೇಕಾಗಿರುವ ಪ್ರತಿಕ್ರಿಯೆಗಳಿಗೆ ಸಂಬಂಧಿಸಿ, ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ FREQUENTLY ASKED QUESTIONS ಎಂಬ ಕೊಂಡಿ(link)ಯನ್ನು ತೆರೆದು ಆದ್ಯತೆಗನುಗುಣವಾಗಿ ಸದರಿ ಪ್ರಶ್ನೆಗಳಿಗೆ ಉತ್ತರ ನೀಡಲು ಕ್ರಮ ಕೈಗೊಳ್ಳುವುದಾಗಿ ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು.

18. ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಕಚೇರಿಗೆ ಭೇಟಿ ನೀಡುವ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಆಡಳಿತ ಸೌಧ ಕಟ್ಟಡದ ಕೆಳ ಅಂತಸ್ತಿನಲ್ಲಿ ಹೊಸದಾಗಿ "May I Help you" counter ನ್ನು ಸ್ಥಾಪಿಸಿಕೊಳ್ಳಲು ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

19. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷೆಗಳಿಗೆ ಸಂಬಂಧಿಸಿ, ನೀಡಲು ಬಾಕಿಯಿರುವ ಫಲಿತಾಂಶ ಮತ್ತು ಅಂಕಪಟ್ಟಿಗಳನ್ನು ವಿತರಿಸಲು ಕೂಡಲೇ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

20. ಮಂಗಳೂರು ವಿಶ್ವವಿದ್ಯಾನಿಲಯದಿಂದ ನಡೆಸಲಾಗುತ್ತಿರುವ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಪ್ರವೇಶಾತಿ ಬಯಸಿ ಅರ್ಜಿ ಸಲ್ಲಿಸುವ ರಾಜ್ಯದ ಅಥವಾ ಹೊರರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪಡೆಯಲು ಅನುಕೂಲವಾಗುವಂತೆ, ವಿಶ್ವವಿದ್ಯಾನಿಲಯದಲ್ಲಿ ಚಾಲ್ತಿಯಲ್ಲಿರುವ ಕಾರ್ಯಕ್ರಮಗಳನ್ನು ನಿಯಂತ್ರಿಸುವ ವಿನಿಯಮದಲ್ಲಿನ ವಿದ್ಯಾರ್ಥಿ ಪ್ರವೇಶಾರ್ಹತೆಗೆ ಸಂಬಂಧಿಸಿದ ಕಲಂನಲ್ಲಿ ಸೂಕ್ತ ತಿದ್ದುಪಡಿಯನ್ನು ಮಾಡಲು ಸಂಬಂಧಪಟ್ಟ ಅಧ್ಯಯನ ಮಂಡಳಿಯ ಅಧ್ಯಕ್ಷರುಗಳಿಗೆ ಮತ್ತು ಕಾಲೇಜು ಅಭಿವೃದ್ಧಿ ಮಂಡಳಿಯ ನಿರ್ದೇಶಕರಿಗೆ ಸೂಚಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

21. ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುತ್ತಿರುವ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಮೀಸಲಿರಿಸಿದ ಸರಕಾರಿ ಕೋಟಾದಡಿಯ ಸೀಟುಗಳು ಭರ್ತಿಯಾಗದಿರುವ ಸಂದರ್ಭದಲ್ಲಿ ಸದರಿ ಸೀಟುಗಳನ್ನು ಮ್ಯಾನೇಜ್‌ಮೆಂಟ್ ಕೋಟಾದಡಿ ಭರ್ತಿಗೊಳಿಸಿ, ಸರಕಾರಿ ಕೋಟಾದಡಿ ನಿಗದಿಪಡಿಸಿದ ಶುಲ್ಕವನ್ನೇ ವಿದ್ಯಾರ್ಥಿಗಳಿಂದ ಭರಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

22. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದ ಅನ್ವಯವಾಗುವಂತೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ (ಉದ್ಯೋಗ, ವ್ಯವಹಾರ, ಕೈಗಾರಿಕೆ ಮತ್ತು ಕೌಶಲ್ಯಾಧಾರಿತ ಇತ್ಯಾದಿ) ಪೂರಕವಾಗಿರುವ ಹೊಸ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳನ್ನು ಅಳವಡಿಸಲು ಅನುಕೂಲವಾಗುವಂತೆ ಕಾಲೇಜು ಅಭಿವೃದ್ಧಿ ಮಂಡಳಿ ಮತ್ತು ಪರಿಣಿತರನ್ನೊಳಗೊಂಡ ಸಮಿತಿಯನ್ನು ರಚಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

23. ಮಂಗಳೂರು ವಿಶ್ವವಿದ್ಯಾನಿಲಯದಿಂದ ನಡೆಸಲಾಗುವ ದರ್ಪಣ ಕಾರ್ಯಕ್ರಮವನ್ನು ಅತೀ ಶೀಘ್ರದಲ್ಲಿ ಆಯೋಜಿಸಿಕೊಂಡು, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶ್ವವಿದ್ಯಾನಿಲಯನ್ನು ಪ್ರತಿನಿಧಿಸಿ ಕ್ರೀಡೆಯಲ್ಲಿ ವಿಶೇಷ ಸಾಧನೆ ಮಾಡಿದ ಕ್ರೀಡಾಪಟುಗಳನ್ನು ಗುರುತಿಸಿ ಸನ್ಮಾನಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಶೀಘ್ರದಲ್ಲಿ ಕ್ರೀಡಾ ಸಲಹಾ ಸಮಿತಿ ಸಭೆ ಕರೆದು ದಿನಾಂಕ ನಿಗದಿಪಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

24. ಶೈಕ್ಷಣಿಕ ವೇಳಾಪಟ್ಟಿಯನ್ನು ತಯಾರಿಸುವ ಸಂದರ್ಭದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸುವ ಸ್ನಾತಕ/ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸುವ ಕಾರ್ಯಕ್ರಮಗಳ ವೇಳಾಪಟ್ಟಿಯನ್ನು ಗಮನದಲ್ಲಿರಿಸಿಕೊಂಡು ವೇಳಾಪಟ್ಟಿಯನ್ನು ತಯಾರಿಸಲು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲೂ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವ

ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಶೀಘ್ರದಲ್ಲಿ ಸಾಂಸ್ಕೃತಿಕ ಸಮಿತಿ ಸಭೆ ಕರೆದು ದಿನಾಂಕ ನಿಗದಿಪಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

25. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ /ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರವೇಶಾತಿ, ಪರೀಕ್ಷೆ ಮತ್ತು ಇತರೆ ವಿಷಯಗಳಿಗೆ ನಿಗದಿಪಡಿಸಲಾದ ಶುಲ್ಕಗಳ ಪರಿಷ್ಕರಣೆಗೆ ಸಂಬಂಧಿಸಿ ಪರಿಷ್ಕೃತ ಶುಲ್ಕವನ್ನು ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದಲೇ ಜಾರಿಗೆ ತರಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

26. ಮಂಗಳೂರು ವಿಶ್ವವಿದ್ಯಾನಿಲಯದ ಸಂಸ್ಥಾಪನಾ ದಿನದಂದು ಸನ್ಮಾನಿತರಾದ 28 ಜನ ಸಾಧಕರ ವ್ಯಕ್ತಿ ಪರಿಚಯ ಮತ್ತು ಸಾಧನೆಯ ಬಗೆಗಿನ ಲೇಖನಗಳನ್ನು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಮೂಲಕ ಮುದ್ರಿಸಿ ಮೇ 2023ರ ಅಂತ್ಯದೊಳಗೆ ಬಿಡುಗಡೆಗೆ ಸೂಕ್ತ ಕ್ರಮಕೈಗೊಳ್ಳಬೇಕೇಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

27. ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ಕಚೇರಿಯಲ್ಲಿ ಹೊರಗುತ್ತಿಗೆ ನೆಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹೊರಗುತ್ತಿಗೆ ನೆಲೆಯಲ್ಲಿ ಬಾಕಿಯಿರುವ ಸಂಭಾವನೆಯನ್ನು ನಿಯಮಾನುಸಾರ ಪಾವತಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

28. "Statute governing the Establishment of the Department of Post Graduate Studies and Research in Physical Education and Sports in Mangalore University." ನ್ನು ಶೀಘ್ರದಲ್ಲಿ ಅಂತಿಮಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಸಿತು.

29. ಡಾ. ಕರುಣಾಕರ ಎನ್. ವಿ. ಇವರನ್ನು ಖಾಯಂ ನೆಲೆಯ ನೇಮಕಾತಿಗೆ ಸಂಬಂಧಿಸಿ ಸರಕಾರಕ್ಕೆ ಪತ್ರ ಬರೆದಿರುವ ವಿಚಾರವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

30. ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪರಿನಿಯಮಗಳಿಗೆ ಸರ್ಕಾರದ ಅನುಮೋದನೆಯನ್ನು ಶೀಘ್ರದಲ್ಲಿ ಪಡೆದುಕೊಳ್ಳುವ ಬಗ್ಗೆ ಕಾರ್ಯಪ್ರವೃತ್ತರಾಗಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

31. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರೊ. ಭೈರಪ್ಪ ಕೆ., ಇವರು ಕುಲಪತಿಗಳಾಗಿದ್ದ ಅವಧಿಯಲ್ಲಿ ನಡೆದಿದೆ ಎನ್ನಲಾದ ಸಿಸಿ ಟಿವಿ, ಬಯೋಮೆಟ್ರಿಕ್, ಸೋಲಾರ್ ಉಪಕರಣ ಇತ್ಯಾದಿಗಳಿಗೆ

ಸಂಬಂಧಿಸಿದ ಹಗರಣದ ಬಗ್ಗೆ ಸರಕಾರದಿಂದ ಅಂತಿಮ ನಿರ್ಣಯ ಬರುವತನಕ ಯಥಾಸ್ಥಿತಿ ಕಾಯ್ದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

32. ಮೆ. ನಿರ್ವಹಣ ಆರ್ಕಿಟೆಕ್ಚರ್, ಮಂಗಳೂರು ಇವರು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Swimmig pool ಸ್ಥಾಪನೆ ಬಗ್ಗೆ Detailed Project Report ನ್ನು ಸಿಂಡಿಕೇಟು ಸಭೆಯಲ್ಲಿ ಪ್ರಸ್ತುತ ಪಡಿಸಿದರು. ಅಂದಾಜು ವೆಚ್ಚ ರೂ.5 ಕೋಟಿ ತಗಲಬಹುದೆಂದು ತಿಳಿಸಿದರು. ಈ ಬಗ್ಗೆ ನಿಯಮಾನುಸಾರವಾಗಿ ಪರಿಶೀಲಿಸಿ, ಮುಂದಿನ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

33. ಮಂಗಳೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಜಾಗದ ಗಡಿ ಗುರುತಿಸುವ ಕಾರ್ಯದ ಪ್ರಗತಿ (Survey) ಬಗ್ಗೆ ಕುಲಸಚಿವರು ಸಭೆಗೆ ತಿಳಿಸಿದರು.

34. M/s.BSR ಇವರಿಗೆ ಪಾವತಿಗೆ ಬಾಕಿಯಿರುವ ಮೊತ್ತದಲ್ಲಿ ರೂ.5ಕೋಟಿಗಳನ್ನು ಮೇ 2023ರ ಅಂತ್ಯದೊಳಗಾಗಿ ಪಾವತಿಸಿದಲ್ಲಿ ಸದರಿ ಸಂಸ್ಥೆಯವರು "International Hostel" ಕಟ್ಟಡದ ಒಂದು ಭಾಗವನ್ನು ವಿಶ್ವವಿದ್ಯಾನಿಲಯಕ್ಕೆ ಬಿಟ್ಟುಕೊಡಲಿರುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಕಟ್ಟಡದಲ್ಲಿ ಪರೀಕ್ಷಾ ಭವನವನ್ನು ಸ್ಥಾಪಿಸುವುದಾಗಿ ಸಭೆಗೆ ತಿಳಿಸಿದರು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಗಳು.** |